

ನಾಯಕತ್ವದಲ್ಲಿ ಐದು ಟೆಸ್ಟ್ ಸರಣಿಗಳನ್ನು ಸತತವಾಗಿ ಗೆದ್ದುಕೊಟ್ಟಿದ್ದಾರೆ. ಒಂದು ದಿನದ ಪಂದ್ಯಗಳಲ್ಲಿ ದೋನಿ ಜತೆಗೆ ಉಪನಾಯಕನಾಗಿರುವ ವಿರಾಟ್ ಕೊಹ್ಲಿ, ಈಗಾಗಲೆ ಸತತ 18 ಟೆಸ್ಟ್ ಪಂದ್ಯಗಳಲ್ಲಿ ಭಾರತ ತಂಡಕ್ಕೆ ಜಯ ತಂದುಕೊಟ್ಟಿದ್ದು, ಐಸಿಸಿ ಟೆಸ್ಟ್ ರ್‍ಯಾಂಕಿಂಗ್‌ನಲ್ಲಿ ಭಾರತದ ನಂಬರ್ ಒನ್ ಸ್ಥಾನವನ್ನು ಉಳಿಸಿಕೊಂಡಿದ್ದಾರೆ.

ಒಂದುದಿನದ ಮತ್ತು ಟ್ವೆಂಟಿ20 ಪಂದ್ಯಗಳಲ್ಲೂ ದಾಖಲೆಯ ರನ್‌ಗಳನ್ನು ಅವರು ಸೇರಿಸುತ್ತಿದ್ದಾರೆ. ಕೊಹ್ಲಿ ನಾಯಕತ್ವಕ್ಕೆ ಇದು ಸಕಾಲ ಎನ್ನುವುದು ದೋನಿಗೂ ಖಚಿತವಾದಂತಿದೆ. 2019ರಲ್ಲಿ ನಡೆಯಲಿರುವ ವಿಶ್ವಕಪ್ ಟೂರ್ನಿಗೆ ಭಾರತ ತಂಡ ಸನ್ನದ್ಧವಾಗಬೇಕೆಂದರೆ ಕೊಹ್ಲಿ ಎರಡು ವರ್ಷಗಳ ಕಾಲವಾದರೂ ಒಂದುದಿನದ ಪಂದ್ಯಗಳಲ್ಲಿ ತಂಡವನ್ನು ಮುನ್ನಡೆಸಬೇಕಿದೆ. ಹಾಗಾಗಿ ಈಗ ನಾಯಕತ್ವ ಬಿಟ್ಟುಕೊಟ್ಟರೆ ಕೊಹ್ಲಿಗೆ ಆ ಅನುಕೂಲವೂ ಆಗಬಹುದು ಎನ್ನುವುದು ದೋನಿ ನಿರೀಕ್ಷೆ ಆಗಿತ್ತು. ಕೆಲವು ತಿಂಗಳ ಹಿಂದೆ ದೋನಿ ಜತೆಗೆ ಆಯ್ಕೆ ಮಂಡಳಿಯ ಅಧ್ಯಕ್ಷ ಎಂ.ಎಸ್.ಕೆ.ಪ್ರಸಾದ್ ಸುದೀರ್ಘ ಚರ್ಚೆ ನಡೆಸಿದ್ದಾಗಲೇ ದೋನಿ ಈ ಕುರಿತು ಪೂರ್ವಸೂಚನೆಗಳನ್ನು ನೀಡಿರಬಹುದು ಎನ್ನಲಾಗುತ್ತಿದೆ.

ಅದೂ ಅಲ್ಲದೆ ಇತ್ತೀಚಿನ ದಿನಗಳಲ್ಲಿ ದೋನಿ ನಾಯಕತ್ವದಲ್ಲಿ ಹಿಂದಿನಂತೆ ಗೆಲುವು ಸರಾಗವಾಗಿ ಬಂದಿಲ್ಲ ಎನ್ನುವುದನ್ನೂ ಗಮನಿಸಬೇಕು. 2016ರಲ್ಲಿ ಆಡಿದ ಒಟ್ಟು 13 ಒಂದುದಿನದ ಪಂದ್ಯಗಳಲ್ಲಿ 7ರಲ್ಲಿ ಮಾತ್ರ ಗೆಲುವು ಸಾಧ್ಯವಾಯಿತು. ಭಾರತ ಆಸ್ಟ್ರೇಲಿಯಾ ವಿರುದ್ಧ 1–4 ಸರಣಿ ಸೋಲು ಬೇರೆ ಅನುಭವಿಸಿತು. ನಾಯಕತ್ವದ ಒತ್ತಡ ವೈಯಕ್ತಿಕ ಆಟದ ಮೇಲೂ ಪರಿಣಾಮ ಬೀರಿದ್ದು ಕೂಡಾ ದೋನಿ ಅರಿವಿಗೆ ಬಂದಿರಬೇಕು. ಹಾಗಾಗಿ ನಾಯಕತ್ವ ತ್ಯಜಿಸಲು ಇದು ಸಕಾಲ ಎನ್ನುವ ನಿರ್ಧಾರಕ್ಕೆ ದೋನಿ ಬಂದಿದ್ದಾರೆ.

ಆಟಗಾರನಾಗಿ ಈಗಲೂ ದೋನಿ ಅತ್ಯಂತ ವಿಶ್ವಾಸಾರ್ಹ ಎನ್ನುವುದರಲ್ಲಿ ಎರಡು ಮಾತಿಲ್ಲ. ಎಷ್ಟೋ ಪಂದ್ಯಗಳನ್ನು ಏಕಾಂಗಿಯಾಗಿ ಗೆದ್ದುಕೊಟ್ಟಿರುವ ದೋನಿ ಇನ್ನೂ ಒಂದೆರಡು ವರ್ಷ ನಾಯಕತ್ವದ ಹೊರೆ ಇಲ್ಲದೆ ಆಟಗಾರನಾಗಿ ಪ್ರೇಕ್ಷಕರನ್ನು ರಂಜಿಸಬಹುದು. ಭಾರತದ ಕೀರ್ತಿಪತಾಕೆಯನ್ನು ಎತ್ತಿಹಿಡಿಯಬಹುದು.

ಇನ್ನೂ ಒಂದು ಅಂಶವನ್ನು ಇಲ್ಲಿ ಗಮನಿಸಬೇಕು. ಸುಪ್ರೀಂಕೋರ್ಟ್ ಈಗಾಗಲೆ ಲೋಧಾ ಸಮಿತಿಯ ಶಿಫಾರಸ್ಸಿನಂತೆ ಬಿಸಿಸಿಐ ನಲ್ಲಿ ಪ್ರಮುಖ ಬದಲಾವಣೆಗಳನ್ನು ಬಯಸಿದೆ. ಹಲವು ಪದಾಧಿಕಾರಿಗಳು ಸ್ಥಾನತ್ಯಾಗ ಮಾಡಿದ್ದಾರೆ. ಈ ಸಂದರ್ಭದಲ್ಲೇ ತಾನೂ ರಾಜೀನಾಮೆ ನೀಡಿದರೆ ಒಳಿತು ಎಂದು ದೋನಿಗೆ ಅನ್ನಿಸಿದ್ದರೆ ಅದರಲ್ಲಿ ಅಸಹಜವಾದದ್ದು ಏನೂ ಇಲ್ಲ. ■


ಶ್ರೀ ಪಂಚಮುಖಿ ಜ್ಯೋತಿಷ್ಯಂ





INDIA'S MOST POPULAR ASTROLOGER

ಪಂಡಿತ. ಶ್ರೀ ಗಣೇಶ್ ಕುಮಾರ್ ಶ್ರೀ ಶ್ರೀ ಹನುಮಾನ್ ಆರಾಧಕರು

ಕೇರಳ, ಕಲ್ಕತ್ತಾದ ಸಾವಿರಾರು ವರ್ಷಗಳ ಹಿಂದಿನ ಪ್ರಾಚೀನ ನಾಡಿಗ್ರಂಥ ಆಧಾರದಿಂದ ಸರ್ವಮಂತ್ರ ವಿದ್ಯೆ, ಜ್ಯೋತಿಷ್ಯ ಶಾಸ್ತ್ರ ಪಂಚಮಹಾಗುರುಗಳ ಬೋಧನೆಯಿಂದ ಯೋಗ ಯಜ್ಞಗಳ ಮೂಲಕ ಸರ್ವ ವಿದ್ಯೆಯನ್ನು ತಮ್ಮ ವಶದಲ್ಲಿರಿಸಿಕೊಂಡಿರುವವರು. ವಶೀಕರಣ, ಮದುವೆ, ಸಂತಾನ, ದಾಂಪತ್ಯ, ಪ್ರೇಮವಿಚಾರ, ಲೈಂಗಿಕ, ಮಾನಸಿಕ, ಗೃಹಶಾಂತಿ, ವಿದ್ಯೆ, ಆರೋಗ್ಯ, ವಿದೇಶ ಪ್ರಯಾಣ, ಹಣಕಾಸು, ವ್ಯಾಪಾರ,ಉದ್ಯೋಗ, ಕೋರ್ಟ್ ಕೇಸು, ಸಾಲಬಾಧೆ, ಮಾಟಬಾಧೆ, ಶತ್ರುಕಾಟ, ಅಲ್ಲದೆ ರಾಜಯೋಗ ವಶ ಮತ್ತು ಅಖಂಡ ಯೋಗವಶಗಳು, ಇನ್ನಿತರ ನಿಮ್ಮ ಯಾವುದೇ ಕಠಿಣ, ನಿಗೂಢ ಮತ್ತು ಗುಪ್ತ ಸಮಸ್ಯೆಗಳಿಗೆ, ಸಲಹೆ ಮತ್ತು ಪರಿಹಾರ ಶತಸಿದ್ಧ.

600 ವರ್ಷ ಹಳೆಯ ಪಂಚಸಿದ್ಧಿ ತಂತ್ರಗಳಿಂದ ನಿಮ್ಮ ದುಶ್ಚಟ, ದೀರ್ಘಾವಧಿ, ಲೈಂಗಿಕ, ಸಂತಾನ, ಸಮಸ್ಯೆಗಳಿಗೆ ಸನಾತನ ಪ್ರಕ್ರಿಯೆಗಳಿಂದ ಅತೀ ಶೀಘ್ರದಲ್ಲಿ ಸಮಗ್ರ ಪರಿಹಾರ ಕಲ್ಪಿಸುತ್ತಿರುವವರು.

ವಿ.ಸೂ.: ಇಲ್ಲಿ ಹೇಳುವ ವಿಷಯಗಳೆಲ್ಲವೂ ಗುಪ್ತವಾಗಿರುವುದರಿಂದ ನಿಮ್ಮ ಯಾವುದೇ ಸಮಸ್ಯೆಗಳನ್ನು ಹೇಳಲು ಹಿಂಜರಿಯಬೇಕಾಗಿಲ್ಲ. ದೂರವಾಣಿ ಹಾಗೂ ಪತ್ರದ ಮೂಲಕ ವಿವರಗಳನ್ನು ಪಡೆಯಬಹುದು.

ಬೆಂಗಳೂರು ಖಾಯಂ ಮನೆ ವಿಳಾಸ ನಂ.167/3, ಮೊದಲನೇ ಮಹಡಿ, 1ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ, ಮುತ್ತುರಾಯಸ್ವಾಮಿ ದೇವಸ್ಥಾನದ ಹತ್ತಿರ, ಮೈಸೂರು ಸರ್ಕಲ್, (ಸಿರಸಿ ವೃತ್ತ), ಚಾಮರಾಜಪೇಟೆ, ಬೆಂಗಳೂರು–18.

ಸಮಸ್ಯೆ ಏನೇ ಇರಲಿ, ಎಷ್ಟೇ ಕಠಿಣವಾಗಿರಲಿ 600 ವರ್ಷಗಳ ಹಳೆಯ 108 ಜ್ಯೋತಿಷ್ಯ ತಂತ್ರಗಳಿಂದ ಮಹೋನ್ನತ ಪರಿಹಾರಗಳು.

ಮೈಸೂರಿನಲ್ಲಿಯೂ ಲಭ್ಯವಿರುತ್ತಾರೆ

ಬೆಂಗಳೂರು ಮೈಸೂರು 9880444450